ಕೈಗೊಂಡಿದ್ದು ಪೂರ್ಣಗೊಳಿಸಲಾಗಿದೆ. ಈ ಆಸ್ಪತ್ರೆಯ ಅಭಿವೃದ್ಧಿಗೆ ಒಟ್ಟು ರೂ.492.00 ಲಕ್ಷಗಳು ವೆಚ್ಚವಾಗಿರುತ್ತದೆ.

ಇ. ಈ ಕಾಮಗಾರಿಗಳು ಪೂರ್ಣಗೊಂಡಿದ್ದು ಜಿಲ್ಲಾ ಶಸ್ತ್ರ ಚಿಕಿತ್ಸಕರಿಗೆ ಹಸ್ತಾಂತರಿಸಲಾಗಿದೆ.

ಶಾಶ್ವತ ಅನುದಾನ ರಹಿತ ಶಾಲಾ ಕಾಲೇಜುಗಳಿಗೆ ಅನುದಾನ.

150(447)

ಶ್ರೀ ಆತ್ಮಾನಂದ ಎಮ್.ಎಸ್.(ಮಂಡ್ಯ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಶಾಶ್ವತ ಅನುದಾನ ರಹಿತ ಶಾಲಾ ಕಾಲೇಜುಗಳಿಗೆ ಅನುದಾನ ನೀಡಲು ಸರ್ಕಾರ ಆಲೋಚಿಸಿದೆಯೇ?

ಆ. ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ. ದಿನಾಂಕ 1.6.87 ರಂದು ಮತ್ತು ತದನಂತರ ಪ್ರಾರಂಭವಾದ ಶಾಲೆಗಳು ಶಾಶ್ವತ ಅನುದಾನ ರಹಿತ ಶಾಲೆಗಳಾಗಿದ್ದು, ಸರ್ಕಾರದ ನೀತಿಯ ಪ್ರಕಾರ ಇಂತಹ ಶಾಲೆಗಳು ಅನುದಾನಕ್ಕೆ ಅರ್ಹವಲ್ಲ.

ಆ. ಪ್ರಶ್ನೆ ಉದ್ಭವಿಸುವುದಿಲ್ಲ.

ಮಂಡ್ಯ ಜಿಲ್ಲೆಯಲ್ಲಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜು ಆರಂಭಿಸುವುದು.

151(448)

ಶ್ರೀ ಆತ್ಮಾನಂದ ಎಂ.ಎಸ್.(ಮಂಡ್ಯ): ಮಾನ್ಯ ಪ್ರಾಥಮಿಕ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಮಂಡ್ಯ ಜಿಲ್ಲೆಯಲ್ಲಿ ಮಹಿಳಾ ಪಾಲಿಟೆಕ್ನಿಕ್ ಪ್ರಾರಂಭಿಸುವ ಅಗತ್ಯತೆಯನ್ನು ಸರ್ಕಾರವು ಮನಗಂಡಿದೆಯೇ;